# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೪ ಎ<br>**Part – IV A** | ಬೆಂಗಳೂರು, ಶುಕ್ರವಾರ, ೨೨, ಆಕ್ಟೋಬರ್, ೨೦೨೧ (ಆಶ್ವಯುಜ, ೩೦, ಶಕವರ್ಷ, ೧೯೪೩)<br>BENGALURU, FRIDAY, 22, OCTOBER, 2021 (ASHWAYUJA , 30, SHAKAVARSHA, 1943) | ನಂ. ೮೪೨<br>**No. 842** |
|---|---|---|


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ
## ಅಧಿಸೂಚನೆ
## ಸಂಖ್ಯೆ: ಸಂವ್ಯಶಾಇ 42 ಶಾಸನ 2021, ಬೆಂಗಳೂರು, ದಿನಾಂಕ: 22.10.20201

ಕರ್ನಾಟಕ ಧಾರ್ಮಿಕ ಕಟ್ಟಡಗಳ (ಸಂರಕ್ಷಣೆ) ವಿಧೇಯಕ, 2021 ಇದಕ್ಕೆ 2021 ರ ಅಕ್ಟೋಬರ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2021ರ ಕರ್ನಾಟಕ ಅಧಿನಿಯಮ ಸಂಖ್ಯೆ:42 ಎಂಬುದಾಗಿ ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

## 2021 ರ ಕರ್ನಾಟಕ ಅಧಿನಿಯಮ ಸಂಖ್ಯೆ:42

(2021 ರ ಅಕ್ಟೋಬರ್ ತಿಂಗಳ 22ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ಧಾರ್ಮಿಕ ಕಟ್ಟಡಗಳ (ಸಂರಕ್ಷಣೆ) ಅಧಿನಿಯಮ, 2021

(2021 ರ ಅಕ್ಟೋಬರ್ ತಿಂಗಳ 19ನೇ ದಿನಾಂಕದಂದು ರಾಜ್ಯ ಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಸಾರ್ವಜನಿಕ ಸ್ಥಳದಲ್ಲಿರುವ ಧಾರ್ಮಿಕ ಕಟ್ಟಡಗಳ ಸಂರಕ್ಷಣೆಗೆ ಉಪಬಂಧ ಕಲ್ಪಿಸಲು ಒಂದು ಅಧಿನಿಯಮ.

ಸಾರ್ವಜನಿಕ ಸ್ಥಳದಲ್ಲಿನ ಧಾರ್ಮಿಕ ಕಟ್ಟಡಗಳ ಸಂರಕ್ಷಣೆಗಾಗಿ ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗಾಗಿ ಉಪಬಂಧ ಕಲ್ಪಿಸುವುದು ವಿಹಿತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಎಪ್ಪತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಧಾರ್ಮಿಕ ಕಟ್ಟಡಗಳ (ಸಂರಕ್ಷಣೆ) ಅಧಿನಿಯಮ, 2021 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಸ್ಥಳೀಯ ಪ್ರಾಧಿಕಾರಗಳು" ಎಂದರೆ, ರಾಜ್ಯ ಸರ್ಕಾರವು ಸಂಬಂಧಪಟ್ಟ ಕಾನೂನಿನ ಮೂಲಕ ರಚಿಸಿದ ಸ್ಥಳೀಯ ಸ್ವಯಂ ಆಡಳಿತ ಮತ್ತು ಸರ್ಕಾರಿ ಒಡೆತನದ, ಸರ್ಕಾರವು ನಿರ್ವಹಿಸುವ ಅಥವಾ ನಿಯಂತ್ರಿಸುವ ಎಲ್ಲಾ ಶಾಸನಾತ್ಮಕ ಅಥವಾ ಶಾಸನಾತ್ಮಕವಲ್ಲದ ಮಂಡಳಿಗಳು, ನಿಗಮಗಳು, ಕಂಪನಿಗಳು, ಸಮಿತಿ, ಇತ್ಯಾದಿಗಳು ಒಳಗೊಳ್ಳುತ್ತವೆ;

(ಬಿ) "ಸಾರ್ವಜನಿಕ ಸ್ಥಳ" ಎಂದರೆ, ಸರ್ಕಾರಕ್ಕೆ ಸೇರಿದ ಸ್ಥಳ ಮತ್ತು ಸ್ಥಳೀಯ ಪ್ರಾಧಿಕಾರ, ಸರ್ಕಾರಿ ಕಂಪನಿ ಅಥವಾ ರಾಜ್ಯ ಸರ್ಕಾರದ ಮಂಡಳಿ ಅಥವಾ ನಿಗಮ ಅಥವಾ ಯಾವುದೇ ಶಾಸನಾತ್ಮಕ ಅಥವಾ ಶಾಸನಾತ್ಮಕವಲ್ಲದ ಸಂಸ್ಥೆಗಳಿಗೆ ಸೇರಿರುವ ಯಾವುದೇ ಆವರಣಗಳು ಒಳಗೊಳ್ಳುತ್ತವೆ; ಮತ್ತು

(ಸಿ) "ಧಾರ್ಮಿಕ ಕಟ್ಟಡ" ಎಂದರೆ, ಕಾನೂನಿನ ಅಧಿಕಾರವಿಲ್ಲದೆ ಸಾರ್ವಜನಿಕ ಸ್ಥಳದಲ್ಲಿ ನಿರ್ಮಿಸಲಾದ ದೇವಸ್ಥಾನ, ಚರ್ಚು, ಮಸೀದಿ, ಗುರುದ್ವಾರ, ಬೌದ್ಧ ವಿಹಾರ, ಮಜರ್, ಇತ್ಯಾದಿಗಳಂಥ ಧಾರ್ಮಿಕ ಕಟ್ಟಡ.

**3. ಧಾರ್ಮಿಕ ಕಟ್ಟಡಗಳ ಸಂರಕ್ಷಣೆ.-** ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಅಡಕವಾಗಿದ್ದರೂ ಅಥವಾ ಯಾವುದೇ ನ್ಯಾಯಾಲಯ, ನ್ಯಾಯಾಧಿಕರಣ ಅಥವಾ ಪ್ರಾಧಿಕಾರದ ಯಾವುದೇ ತೀರ್ಪು, ಡಿಕ್ರಿ ಅಥವಾ ಆದೇಶ ಏನೇ ಇದ್ದರೂ, ಈ ಅಧಿನಿಯಮದ ಪ್ರಾರಂಭದ ದಿನಾಂಕದಿಂದ, ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ಸರ್ಕಾರವು ನಿಯಮಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ಈ ಅಧಿನಿಯಮ ಪ್ರಾರಂಭದ ದಿನಾಂಕದಂದು ಅಸ್ತಿತ್ವದಲ್ಲಿರುವ ಧಾರ್ಮಿಕ ಕಟ್ಟಡಗಳನ್ನು ಸಂರಕ್ಷಿಸತಕ್ಕದ್ದು:

ಪರಂತು, ಅವುಗಳನ್ನು ತೆರವಿಗೆ ಸಂಬಂಧಿಸಿದಂತೆ ಯಾವುದೇ ಪ್ರಕರಣವು ಯಾವುದೇ ನ್ಯಾಯಾಲಯದಲ್ಲಿ ಇತ್ಯರ್ಥದಲ್ಲಿದ್ದರೆ ಮತ್ತು ನಿಯಮಿಸಬಹುದಾದಂಥ ಇತರ ಸನ್ನಿವೇಶಗಳಲ್ಲಿ ಯಾವುದೇ ಸಂರಕ್ಷಣೆಯನ್ನು ಮಾಡತಕ್ಕದ್ದಲ್ಲ.

**4. ಸಾರ್ವಜನಿಕ ಸ್ಥಳಗಳಲ್ಲಿನ ಧಾರ್ಮಿಕ ಕಟ್ಟಡಗಳು.-** ರಾಜ್ಯ ಸರ್ಕಾರ ಅಥವಾ ಯಾವುದೇ ಸ್ಥಳೀಯ ಪ್ರಾಧಿಕಾರವು ಭವಿಷ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ಧಾರ್ಮಿಕ ಕಟ್ಟಡವನ್ನು ನಿರ್ಮಿಸಲು ಸೂಕ್ತ ಪರವಾನಗಿಯಿಲ್ಲದೆ ಅವಕಾಶವನ್ನು ನೀಡತಕ್ಕದ್ದಲ್ಲ.

**5. ಧಾರ್ಮಿಕ ಕಾರ್ಯಚಟುವಟಿಕೆಗಳಿಗೆ ಅವಕಾಶ ನೀಡುವುದು.-** ಜಿಲ್ಲಾಡಳಿತವು, ರೂಢಿ, ಕಾನೂನು, ರಿವಾಜಿಗೆ ಮತ್ತು ರಾಜ್ಯ ಸರ್ಕಾರವು ಕಾಲ ಕಾಲಕ್ಕೆ ವಿಧಿಸಬಹುದಾದಂಥ ಯಾವುದೇ ಇತರ ಷರತ್ತುಗಳಿಗೆ ಒಳಪಟ್ಟು ಅಂಥ ಸಂರಕ್ಷಿತ ಕಟ್ಟಡಗಳಲ್ಲಿ ಯಾವುದೇ ಧಾರ್ಮಿಕ ಕಾರ್ಯಚಟುವಟಿಕೆಗಳನ್ನು ನಡೆಸಲು ಅವಕಾಶ ನೀಡಬಹುದು.

**6. ಕೈಗೊಂಡ ಕ್ರಮಕ್ಕೆ ವಿನಾಯಿತಿ.-**ರಾಜ್ಯ ಸರ್ಕಾರ ಅಥವಾ ರಾಜ್ಯ ಸರ್ಕಾರದ ಯಾರೇ ಅಧಿಕಾರಿ ಅಥವಾ ಇತರ ನೌಕರರು ಈ ಅಧಿನಿಯಮದ ಅಡಿಯಲ್ಲಿ ಅಥವಾ ಅದರಡಿ ರಚಿಸಿದ ನಿಯಮಗಳ ಅಡಿಯಲ್ಲಿ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ಅವರ ವಿರುದ್ಧ ಯಾವುದೇ ಕಾನೂನು ವ್ಯವಹರಣೆಯನ್ನು ಹೂಡತಕ್ಕದ್ದಲ್ಲ.

**7. ನಿಯಮಗಳ ರಚನಾಧಿಕಾರ.-** (1) ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯ ಪತ್ರದಲ್ಲಿ ಅಧಿಸೂಚನೆಯ ಮೂಲಕ, ಪೂರ್ವಪ್ರಕಟಣೆಯ ತರುವಾಯ, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸಲು ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವಾಗತಕ್ಕದ್ದಲ್ಲ.

**8. ತೊಂದರೆಗಳನ್ನು ನಿವಾರಿಸಲು ಅಧಿಕಾರ.-** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವುದಕ್ಕೆ ಸಂಬಂಧಿಸಿದಂತೆ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯ ಪತ್ರದಲ್ಲಿ ಆದೇಶವನ್ನು ಪ್ರಕಟಿಸುವ ಮೂಲಕ ಅಂಥ ತೊಂದರೆಯನ್ನು ನಿವಾರಿಸುವುದಕ್ಕಾಗಿ ಅವಶ್ಯಕವೆಂದು ಅಥವಾ ಸೂಕ್ತವೆಂದು ತನಗೆ ಕಂಡುಬರಬಹುದಾದ, ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗಿರದ ಅಂಥ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮದ ಪ್ರಾರಂಭದ ದಿನಾಂಕದಿಂದ ಎರಡು ವರ್ಷಗಳ ಅವಧಿಯು ಮುಕ್ತಾಯವಾದ ತರುವಾಯ ಅಂಥ ಯಾವುದೇ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) ಈ ಪ್ರಕರಣದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ಆದೇಶವನ್ನು ಅದನ್ನು ಹೊರಡಿಸಿದ ತರುವಾಯ ಆದಷ್ಟು ಬೇಗನೇ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ.ಶ್ರೀಧರ್**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

# PARLIAMENTARY AFFAIRS AND LEGISLATION SECRETARIAT
# NOTIFICATION
# NO.DPAL 42 SHASHANA 2021, BENGALURU, DATED: 22.10.2021

ಭಾರತ ಸಂವಿಧಾನದ ಅನುಚ್ಛೇಧ 348ರ ಖಂಡ (3)ರ ಅಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಕರ್ನಾಟಕ ಧಾರ್ಮಿಕ ಕಟ್ಟಡಗಳ (ಸಂರಕ್ಷಣೆ) ಅಧಿನಿಯಮ, 2021 (2021ರ ಕರ್ನಾಟಕ ಅಧಿನಿಯಮ ಸಂಖ್ಯೆ: 42)ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**KARNATAKA ACT NO. 42 OF 2021**

**(First Published in the Karnataka Gazette Extra-ordinary on the 22nd day of October, 2021)**

**THE KARNATAKA RELIGIOUS STRUCTURES (PROTECTION) ACT, 2021**
**(Received the assent of the Governor on the 19th day of October, 2021)**

An Act to provide protection to religious structure on a public place.

Whereas it is expedient to provide protection to religious structure on a public place and for the matters connected therewith or incidental thereto;

Be it enacted by the Karnataka State Legislature in the Seventy Second year of the Republic of India, as follows:-

**1. Short title and commencement.-** (1) This Act may be called the Karnataka Religious Structures (Protection) Act, 2021.

(2) It shall come into force at once.

**2. Definitions.-**In this Act unless the context otherwise requires,-

(a) “Local Authority” means the local self Government constituted by the State Government under relevant Laws and includes all the Government owned, managed or controlled, statutory or non statutory Boards, Corporations, companies, committee etc;

(b) “Public Place” means a place belonging to the Government and includes any premises belonging to a Local Authority, a Government company, or a Board or Corporation or any statutory or non statutory body of the State Government; and

(c) “Religious structure” means those religious structure such as temple, church, mosque, Gurudwara, Bodh vihar, Majar etc, constructed on public place without authority of law.

**3. Protection of religious structures.-** Notwithstanding anything contained in any law for the time being in force or any judgment, decree or order of any court, tribunal or authority from the date of commencement of this Act, subject to the provisions of this Act, or the rules made there under the Government shall protect the religious structures existing on the date of commencement of this Act, in such manner subject to such conditions as may be prescribed:

Provided that no protection shall be done, if any case relating to their removal is pending in any court of law and in such other circumstances as may be prescribed.

**4. Religious structures on public places.-** No religious structure and construction shall be allowed by the State Government or any Local Authority without proper permission in future on a public place.

**5. Allowing religious activity.-**The District Administration may allow religious activity in such protected structures subject to custom, Law, usage and any other conditions as may be laid down by the State Government from time to time.

**6. Exemption of action.-** No legal proceeding shall lie against the State Government or any officer, or other employees of the State Government for anything which is done or intended to be done under this Act or rules made there under.

**7. Power to make rules.-** (1) The State Government may, after previous publication, by notification in the Official Gazette, make rules to carry out the purposes of this Act.

(2) Every rule made under this Act shall be laid, as soon as may be, after it is made, before each House of the State Legislature, while it is in session for a total period of thirty days which may be comprised in one session or in two or more successive sessions, and if, before the expiry of the session in which it is so laid or the session or sessions immediately following, both Houses agree in making any modification in the rule or both Houses agree that the rule should not be made, the rule shall thereafter have effect only in such modified form or be of no effect, as the case may be; so, however, that any such modification or annulment shall be without prejudice to the validity of anything previously done under that rule.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



**8. Power to remove difficulties.-** (1) If any difficulty arises, in giving effect to the provisions of this Act, the Government may, by order published in the official Gazette, make such provisions not inconsistent with the provisions of this Act, as may appear to be necessary or expedient for removing the difficulty:

Provided that, no such order shall be made after the expiry of a period of two years from the date of commencement of this Act.

(2) Every order made under this section shall, as soon as may be after it is made, be laid before both Houses of the State Legislature.

The above translation of **ಕರ್ನಾಟಕ ಧಾರ್ಮಿಕ ಕಟ್ಟಡಗಳ** (**ಸಂರಕ್ಷಣೆ**) **ಅಧಿನಿಯಮ**, **2021** (**2021ರ ಕರ್ನಾಟಕ ಅಧಿನಿಯಮ ಸಂಖ್ಯೆ**: **42**) be published in the official Gazette under clause (3) of Article 348 of the constitution of India.

**THAAWARCHAND GEHLOT**
**GOVERNOR OF KARNATAKA**

By Order and in the name of
the Governor of Karnataka,

**G.SRIDHAR**
Secretary to Government
Department of Parliamentary
Affairs and Legislation

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು